<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.</u>

ಸಿ.ಸಿ. ನಂಃ 616/2015 ಸಿಡಬ್ಲ್ಯೂ: 3 ಪಿಡಬ್ಲ್ಯೂ: 3

ಪ್ರಮಾಣವಚನ ಬೋಧಿಸಲಾಯಿತು ದಿಃ 14-02-2025

ಹೆಸರು : ಶಾಮರಾವ್

ತಂದೆ ಹೆಸರು : ನರಸಪ್ಪ

ವಯಸ್ಸು : 40 ವರ್ಷ

ಉದ್ಯೋಗ : ಆಟೋ ಚಾಲಕ

ವಾಸಸ್ಥಳ : ಸೇಡಂ

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಘಟನಾ ಸ್ಥಳದ ಪಂಚನಾಮೆಯಾಗಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೆ ನಿ ಪಿ 2 ಎಂದು ಗುರುತಿಸಲಾಗಿದೆ. ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಅದೇ ರೀತಿ ಸದರಿ ಸಹಿಯನ್ನು ಬಸ್ಸು ನಿಲ್ದಾಣದಲ್ಲಿ ಮಾಡಿರುತ್ತೇನೆ ಆದರೆ ಯಾಕೆ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ.

ಸಾಕ್ಷಿಗೆ ಇನ್ನೊಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಜಪ್ತು ಪಂಚನಾಮೆಯಾಗಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೆ ನಿ ಪಿ 3 ಎಂದು ಗುರುತಿಸಲಾಗಿದೆ. ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಅದೇ ರೀತಿ ಸದರಿ ಸಹಿಯನ್ನು ಬಸ್ಸು ನಿಲ್ದಾಣದಲ್ಲಿ ಮಾಡಿರುತ್ತೇನೆ ಆದರೆ ಯಾಕೆ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಮುಂದೆ ಯಾವುದೇ ವಸ್ತು ಜಪ್ತು ಪಡಿಸಿರುವುದಿಲ್ಲ.

ಸಾಕ್ಷಿಗೆ ಇನ್ನೊಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಜಪ್ತು ಪಂಚನಾಮೆಯಾಗಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 4 ಎಂದು ಗುರುತಿಸಲಾಗಿದೆ. ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಅದೇ ರೀತಿ ಸದರಿ ಸಹಿಯನ್ನು ಬಸ್ಸು ನಿಲ್ದಾಣದಲ್ಲಿ ಮಾಡಿರುತ್ತೇನೆ ಆದರೆ ಯಾಕೆ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ.

ಸಾಕ್ಷಿಗೆ ಇನ್ನೊಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಜಪ್ತು ಪಂಚನಾಮೆಯಾಗಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 5 ಎಂದು ಗುರುತಿಸಲಾಗಿದೆ. ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು. ಅದೇ ರೀತಿ ಸದರಿ ಸಹಿಯನ್ನು ಬಸ್ಸು ನಿಲ್ದಾಣದಲ್ಲಿ ಮಾಡಿರುತ್ತೇನೆ ಆದರೆ ಯಾಕೆ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ವಾಟೀಸವಾಲುಃ** ಮಾನ್ಯ ಸ.ಸ.ಅ ರವರಿಂದ:

ದಿ.13-04-2011 ರಂದು ನನ್ನ ಹಾಗೂ ಚಾ ಸಾ 2 ರವರ ಸಮಕ್ಷಮ SBH ಬ್ಯಾಂಕಿನಲ್ಲಿ ಪೋಲೀಸರು ಬೆಳಿಗ್ಗೆ 09-45 ರಿಂದ 10-45 ರ ವರೆಗೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ರೀತಿ ದಿ.20-04-2011 ರಂದು ನನ್ನ ಹಾಗೂ ಚಾ ಸಾ 2 ರವರ ಸಮಕ್ಷಮ SBH ಬ್ಯಾಂಕಿನಲ್ಲಿ ಪೋಲೀಸರು ಮಧ್ಯಾಹ್ನ 12-30 ರಿಂದ 01-30 ರ ವರೆಗೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯ ಅವಧಿಯಲ್ಲಿ ಪೊಲೀಸರು ಚಕ್ ನಂ.316004 ನೇದ್ದನ್ನು ಕೈಬರಹ ತಜ್ಞರ ಅಭಿಪ್ರಾಯ ಸಲುವಾಗಿ ಕಳುಹಿಸಲು ವಶಕ್ಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಅದೇ ರೀತಿ ದಿ. 30-05-2011 ರಂದು ನನ್ನ ಹಾಗೂ ಚಾ ಸಾ 2 ರವರ ಸಮಕ್ಷಮ ಪೋಲೀಸರು ಸಂಜೆ 05-45 ರಿಂದ 06-30 ರ ವರೆಗೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯ ಅವಧಿಯಲ್ಲಿ 10,000/- ರೂ. ಹಣವನ್ನು ಅದರಲ್ಲಿ 1000/- ಮುಖಬೆಲೆಯ 6 ನೋಟುಗಳು, 500/- ಮುಖಬೆಲೆಯ 6 ನೋಟುಗಳು , 100/- ಮುಖಬೆಲೆಯ 10 ನೋಟುಗಳನ್ನು 5 ನೇ ಆರೋಪಿತರ ಮನೆಯಿಂದ ಜಪ್ತು ಪಡಿಸಿರುತ್ತಾರೆ ಎಂದರೆ ಸರಿಯಲ್ಲ.

ಅದೇ ರೀತಿ ದಿ.31-05-2011 ರಂದು ನನ್ನ ಹಾಗೂ ಚಾ ಸಾ 2 ರವರ ಸಮಕ್ಷಮ ಪೋಲೀಸರು ಸಂಜೆ 05-45 ರಿಂದ 06-30 ರ ವರೆಗೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯ ಅವಧಿಯಲ್ಲಿ ಸಮಾಜ ಕಲ್ಯಾಣ ಅಧಿಕಾರಿ ಸೇಡಂ ರವರು ತೆಳು ಹಳದಿ ಬಣ್ಣದ ಸೀಲ್, ಒಂದು ಚಕ್ಕು ಕೌಂಟರ್ ಫೈಲು ನಂ. 316001 ರಿಂದ 316020 ಹಾಗೂ ಒಂದು ಆಫೀಸ್ ರಿಜಿಸ್ಟರ್ ಜಪ್ತು ಪಡಿಸಿರುತ್ತಾರೆ ಎಂದರೆ ಸರಿಯಲ್ಲ.

ಸಾಕ್ಷಿಗೆ ಒಂದು ಚೆಕ್ ಸಂಖ್ಯೆ 316004 ನೇದ್ದನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಲು ನಿರಾಕರಿಸುತ್ತಾರೆ ಅದನ್ನು ಮು ಮಾ 1 ಎಂದು ಗುರುತಿಸಲಾಯಿತು. ಅದೇ ರೀತಿ ಒಂದು ಹಳದಿ ಬಣ್ಣದ ಸೀಲನ್ನು ನೋಡಿ ಗುರುತಿಸಲು ನಿರಾಕರಿಸಿರುತ್ತಾರೆ ಅದನ್ನು ಮು ಮಾ 2 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸ ಸ ಅ ರವರ ಮುಂದುವರೆದ ಪಾಟಿ ಸವಾಲಿಗೆ ಸಮಯಾವಕಾಶವನ್ನು ಕೋರಿದ್ದು ಸಮಯ ನೀಡಲಾಯಿತು)

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**